**ಹೆಚ್ಚುವರಿ ಸಿವಿಲ್ ಹಾಗೂ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಯಾದಗಿರಿ.**

**ಉಪಸ್ಥಿತರುಃ- ಶ್ರೀ ರಾಹುಲ ಚಾಂಭಾರ ಬಿ.ಎ.ಎಲ್.ಎಲ್.ಬಿ**
**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ಯಾದಗಿರಿ,**

**ಸಿ.ಸಿ. ನಂಃ 269/2020**

**ಫಿರ್ಯಾಧಿದಾರಃ ಕರ್ನಾಟಕ ಸರ್ಕಾರದ ಪರವಾಗಿ ಯಾದಗಿರಿ (ಗ್ರಾ) ಪೊಲೀಸ್ ಠಾಣೆ**

**// ವಿರುದ್ಧ //**

**ಆರೋಪಿ ಃ ರವಿಕುಮಾರ**

**ದೋಷಾರೋಪಣೆ**

| | |
|---|---|
| ಆರೋಪಿ. | ರವಿಕುಮಾರ ತಂದೆಃ ಜ್ಞಾನಮಿತ್ರ ನರಸಣ್ಣೋರ, ವಃ 24 ವರ್ಷ, ಉಃ ವ್ಯಾಪಾರ, ಸಾಃ ಯಡ್ಡಳ್ಳಿ, ತಾಃ ಜಿಃ ಯಾದಗಿರಿ |

**ಆದ ನಿಮ್ಮ ವಿರುದ್ಧ ದೋಷಿಸುವ ದೋಷಾರೋಪಣೆ ಏನೆಂದರೆ,**

ಮೊದಲನೆಯದಾಗಿ ದಿನಾಂಕಃ 08-02-2020 ರಂದು ಸಾಯಂಕಾಲ 6-20 ಗಂಟೆ ಸುಮಾರಿಗೆ ಯಾದಗಿರಿ (ಗ್ರಾ) ಪೋಲಿಸ್ ಠಾಣೆಯ ಹದ್ದಿಯಲ್ಲಿ ಬರುವ ಯಡ್ಡಳ್ಳಿ ಗ್ರಾಮದಲ್ಲಿ ಆರೋಪಿಯಾದ ನೀನು ನಿನ್ನ ಕಿರಾಣಿ ಅಂಗಡಿಯಲ್ಲಿ ಅನಧಿಕೃತವಾಗಿ ಮಧ್ಯವನ್ನು ಮಾರಾಟ ಮಾಡಲು ಸಂಗ್ರಹಿಸಿ ಇಟ್ಟಿದ್ದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತಿ.

2. ಎರಡನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀನು 90 ಎಮ್ ಎಲ್ ನ 50 ಓರಿಜಿನಲ್ ಚಾಯ್ಸ್ ಪೇಪರ ಪಾಕೇಟುಗಳು ಸರ್ಕಾರದಿಂದ ಯಾವುದೇ ಪರವಾನಿಗೆ ಪಡೆಯದೇ ಅನಧಿಕೃತವಾಗಿ ಸಾರ್ವಜನಿಕರಿಗೆ ಕುಡಿಯಲು ಮಾರಾಟ

ಮಾಡುತ್ತಿದ್ದು, ಈ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತಿ.

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ತೆರೆದ ನ್ಯಾಯಾಲಯದಲ್ಲಿ ದೋಷಾರೋಪಣೆಯನ್ನು ಆರೋಪಿತರಿಗೆ ತಿಳಿಯವ ಭಾಷಯಲ್ಲಿ ಓದಿ ಹೇಳಲಾಯಿತು)

**ದಿನಾಂಕಃ**

**ಸ್ಥಳಃ ಯಾದಗಿರಿ**

**ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ**
**ನ್ಯಾಯಾಧೀಶರು ಯಾದಗಿರಿ.**